CAREERINDIA

SL. No. : DD

ಒಟ್ಟು ಪ್ರಶ್ನೆಗಳ ಸಂಖ್ಯೆ : 64 ]
Total No. of Questions : 64 ]
ಸಂಕೇತ ಸಂಖ್ಯೆ : 01-K

**CCE PF REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8
[ Total No. of Printed Pages : 8
Code No. : 01-K

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಹೊಸ ಪಠ್ಯಕ್ರಮ / New Syllabus)**

**(ಖಾಸಗಿ ಅಭ್ಯರ್ಥಿ / Private Fresh)**

ದಿನಾಂಕ : 23. 03. 2018 ] [ Date : 23. 03. 2018

ಸಮಯ : ಬೆಳಿಗ್ಗೆ 9-30 ರಿಂದ 12-45 ರವರೆಗೆ ] [ Time : 9-30 A.M. to 12-45 P.M.

ಗರಿಷ್ಠ ಅಂಕಗಳು : 125 ] [ Max. Marks : 125

***ಪರೀಕ್ಷಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು 64 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ಕೊಡಲಾಗಿದೆ.

ಇಲ್ಲಿ ಕತ್ತರಿಸಿ

TEAR HERE TO OPEN THE QUESTION PAPER
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

Tear here

www.careerindia.com

CAREERINDIA



## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪೋಷಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ :** $16 \times 1 = 16$

1. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು ?
2. ಮುದುಕಿಯ ಬಳಿ ರಾಹಿಲ ನುಡಿದ ಗಂಭೀರವಾದ ಮಾತು ಯಾವುದು ?
3. ಮತಂಗಾಶ್ರಮಕ್ಕೆ ಹೋಗಲು ರಾಮಲಕ್ಷ್ಮಣರಿಗೆ ಸೂಚಿಸಿದವರು ಯಾರು ?
4. ವಚನಕಾರರಿಗೆ ಯಾವುದು ದೇವರಾಗಿತ್ತು ?
5. ಧರ್ಮಬುದ್ಧಿಯು ಸೂರ್ಯೋದಯವಾದ ಕೂಡಲೆ ಏನು ಮಾಡಿದನು ?
6. ಯಶೋಭದ್ರೆಯು ರತ್ನಗಂಬಳಿಗಳನ್ನು ಯಾರಿಗೆ ಕೊಟ್ಟಳು ?
7. ಕವಿ ಜಿ.ಎಸ್. ಶಿವರುದ್ರಪ್ಪನವರು ಕಾಡುಮೇಡುಗಳ ಸ್ಥಿತಿ ಹೇಗಿದೆ ಎಂದು ಹೇಳಿದ್ದಾರೆ ?
8. ಹಕ್ಕಿಯ ಗರಿಯಲ್ಲಿ ಯಾವ ಯಾವ ಬಣ್ಣಗಳಿವೆ ?
9. ಕಾಲಪಕ್ಷಿ ಯಾರನ್ನು ಹರಸಿದೆ ?
10. ಕುಂಪಣಿ ಸರ್ಕಾರ ಹೊರಡಿಸಿದ ಆದೇಶ ಏನು ?
11. ಅಶ್ವಿನಿ ದೇವತೆಗಳ ವರಬಲದಿಂದ ಜನಿಸಿದವರು ಯಾರು ?
12. ಕುವೆಂಪುರವರಿಗೆ ಮಕಮಲ್ಲಿನ ಜಮಖಾನೆಯಂತೆ ಯಾವುದು ಕಂಡಿದೆ ?
13. ಛಲವನ್ನೇ ಮೆರೆಯುವುದಾಗಿ ನಿರ್ಧರಿಸಿದವರು ಯಾರು ?
14. ಲವನು ಕುದುರೆಯನ್ನು ಯಾವುದರಿಂದ ಕಟ್ಟಿದನು ?
15. ಹಾಲುಗಲ್ಲದ ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ ?
16. ಪುಟ್ಟ ಪೋರಿಯ ಅಮ್ಮ ಎಲ್ಲಿ ಮಲಗಿದ್ದಾಳೆ ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $16 \times 2 = 32$

17. ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ ಮೂಡಿದ ಪ್ರಶ್ನೆಗಳಾವುವು ?
18. ಲಂಡನ್ನಿನ ಹೆಣ್ಣುಮಕ್ಕಳು ಯಾವ ಯಾವ ಕೆಲಸಗಳಲ್ಲಿ ನಿಯುಕ್ತರಾಗಿರುತ್ತಾರೆ ?
19. ಅಶೋಕ ಪೈ ಅವರು ಹೇಳಿದ ಸಂಶೋಧನಾ ಸತ್ಯವನ್ನು ತಿಳಿಸಿ.
20. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಯನ್ನು ತಿಳಿಸಿ.
21. ದುಷ್ಟಬುದ್ಧಿಯು ತನ್ನ ತಂದೆಯನ್ನು ಏಕಾಂತಕ್ಕೆ ಕರೆದು ಹೇಳಿದ ಮಾತುಗಳಾವುವು ?
22. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯನ್ನು ನೀಡಿದನು ?
23. ವೃಷಭಾಂಕನು ಸುಕುಮಾರಸ್ವಾಮಿಗೆ ವ್ಯಾದಿಯಿದೆ ಎಂದು ಭಾವಿಸಲು ಕಾರಣವೇನು ?



www.careerindia.com

CAREERINDIA



24. ರತ್ನಗಂಬಳಿಗಳನ್ನು ಕೊಂಡ ಸಂದರ್ಭದಲ್ಲಿ ಅರಸ ವೃಷಭಾಂಕನು ಆಶ್ಚರ್ಯಗೊಳ್ಳಲು ಕಾರಣವೇನು ?

25. ಹಲಗಲಿಯ ಬೇಡರು ದಂಗೆ ಏಳಲು ಕಾರಣಗಳೇನು ?

26. ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ತಿಳಿಸಿ.

27. ಯಜ್ಞಾಶ್ವದ ಹಣೆಯಲ್ಲಿದ್ದ ಒಕ್ಕಣೆಯನ್ನು ಬರೆಯಿರಿ.

28. ಪರಶುರಾಮನು ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು ?

29. ಜಾತಿ ವ್ಯವಸ್ಥೆಯ ಬಗ್ಗೆ ವಿವೇಕಾನಂದರ ಅಭಿಪ್ರಾಯವೇನು ?

30. ಭರತ್‌ಸಿಂಗ್‌ನ ಸಹೋದರಿಗೆ ಆತನ ಉಪವಾಸದ ಕಾರಣಗಳು ಹೇಗೆ ತಿಳಿದು ಬಂದವು ?

31. ಮೃಗದ ಬಗೆಗೆ ಸುಂದರಿಯ ಮನಸ್ಸು ಏಕೆ ಕರಗುತ್ತಿತ್ತು ?

32. 'ಉತ್ತರಾಣಿ ಗಿಡ' ಎಂಬ ಉತ್ತರ ಬರಲು ಹೇಳಿದ ಒಗಟು ಯಾವುದು ?

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** $6 \times 3 = 18$

33. "ಪ್ರವಾಸವು ಶಿಕ್ಷಣದ ಒಂದು ಭಾಗವಾಗಿದೆ"

34. "ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ"

35. "ದೇವರೆ, ಮರ ಹತ್ತುವಷ್ಟು ಅವಕಾಶ ಕರುಣಿಸು"

36. "ಸಾರ್ವಭೌಮರಾ ನೆತ್ತಿಯ ಕುಕ್ಕಿ"

37. "ಕೆಟ್ಟು ವರ್ಣಿಸಿ ಹೇಳಿದೆ ಕಂಡಷ್ಟು"

38. "ಬೇರೆ ಬಣ್ಣವನೆ ಕಾಣೆ"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿ / ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** $2 \times 3 = 6$

39. ಪು.ತಿ. ನರಸಿಂಹಾಚಾರ್

40. ಪಂಪ

41. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** $1 \times 4 = 4$

ನೆಲಕಿಳಿವೆನೆಂದು ..........................................................

..................................................................................

..................................................................................

........................................................... ಪುದುವಾಟಿಪೆನೇ॥

**ಅಥವಾ**



www.careerindia.com

CAREERINDIA



ಪುಟ್ಟಿದ ..........................................................................

..............................................................................

..............................................................................

...................................................................... ಮೆಱೆವೆಂ॥

42. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** 1 × 4 = 4

ಬಿದ್ದುದನ್ನು ಮೇಲೆಬ್ಬಿಸಿ ನಿಲ್ಲಿಸಿ
ಹೊಸ ಭರವಸೆಗಳ ಕಟ್ಟೋಣ.
ಮನುಜರ ನಡುವಣ ಅಡ್ಡಗೋಡೆಗಳ
ಕೆಡವುತ ಸೇತುವೆಯಾಗೋಣ.

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 2 × 4 = 8

43. ಮೈಸೂರು ಸಂಸ್ಥಾನ 'ಮಾದರಿ ಮೈಸೂರು ರಾಜ್ಯ' ಎಂಬ ಕೀರ್ತಿಗೆ ಪಾತ್ರವಾಗುವಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ ಪಾತ್ರವೇನು ? ವಿವರಿಸಿ.

***ಅಥವಾ***

ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.

44. ತನ್ನ ಜನ್ಮರಹಸ್ಯ ತಿಳಿದಾಗ ಕರ್ಣನ ಮನದಲ್ಲಿ ಮೂಡಿದ ಭಾವನೆಗಳೇನು ?

***ಅಥವಾ***

ಶ್ರೀಕೃಷ್ಣನು ಕರ್ಣನಿಗೆ ಒಡ್ಡಿದ ಆಮಿಷಗಳನ್ನು ಕುರಿತು ಬರೆಯಿರಿ.

45. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** 2 × 2 = 4

ವಿಶ್ವದ ಬಹುಭಾಷಾ ಪ್ರಪಂಚದಲ್ಲಿ ಸುಮಾರು ನಾಲ್ಕು ಸಾವಿರ ಭಾಷೆಗಳಿವೆ. ಭಾಷೆಗಳನ್ನು ವ್ಯಾವಹಾರಿಕ ಮತ್ತು ಗ್ರಾಂಥಿಕ ಭಾಷೆ ಎಂದು ವಿಂಗಡಿಸಲಾಗಿದೆ. ವ್ಯಾವಹಾರಿಕ ಎಂದರೆ ಜೀವದ ಭಾಷೆ. ಇದರಲ್ಲಿ ಜನರು ಮಾತನಾಡುತ್ತಾರೆ, ವ್ಯವಹರಿಸುತ್ತಾರೆ. ಉದಾಹರಣೆ ಕನ್ನಡ, ತುಳು, ಕೊಂಕಣಿ, ಉರ್ದು ಇತ್ಯಾದಿ. ಅಭಿವೃದ್ಧಿ ಹೊಂದಿ ಗ್ರಂಥ ರಚನೆಯಲ್ಲಿ ಬಳಸುವ ಭಾಷೆಯೇ ಗ್ರಾಂಥಿಕ ಭಾಷೆ. ಉದಾಹರಣೆ ಸಂಸ್ಕೃತ, ಇಂಗ್ಲಿಷ್, ಹಿಂದಿ ಇತ್ಯಾದಿ ಎಲ್ಲಾ ಗ್ರಾಂಥಿಕ ಭಾಷೆಗಳು ವ್ಯಾವಹಾರಿಕವಾಗಬೇಕಿಲ್ಲ ಹಾಗೆಯೇ ಎಲ್ಲಾ ವ್ಯಾವಹಾರಿಕ ಭಾಷೆಗಳು ಗ್ರಾಂಥಿಕವಾಗಬೇಕೆಂಬ ನಿಯಮವಿಲ್ಲ. ತುಳು ಒಂದು ಸುಂದರ ವ್ಯಾವಹಾರಿಕ ಭಾಷೆ. ಆದರೆ ಗ್ರಾಂಥಿಕ ಭಾಷೆಯಲ್ಲ. ದೇವಭಾಷೆ ಎನಿಸಿರುವ ಸಂಸ್ಕೃತ ಗ್ರಾಂಥಿಕ ಭಾಷೆಯಾಗಿದೆ ಆದರೆ,

www.careerindia.com

CAREERINDIA



ಯಾವ ಪ್ರದೇಶದಲ್ಲಿಯೂ ವ್ಯಾವಹಾರಿಕವಾಗಿಲ್ಲ. ನವಶಿಲಾಯುಗದ ಮಾನವ ತನ್ನ ಸಂಚಾರಿ ಜೀವನವನ್ನು ತ್ಯಜಿಸಿ ಒಂದೆಡೆ ಬೀಡು ಬಿಟ್ಟು ಆಸ್ತಿ, ಮನೆ, ಬದುಕು ಮೊದಲಾದ ಭಾವನೆಯನ್ನು ಹೊಂದಲು ಪ್ರಾರಂಭಿಸಿದಂದಿನಿಂದ ಆತನಿಗೆ ಲೆಕ್ಕವಿಡುವ ಅವಶ್ಯಕತೆ ಉಂಟಾಯಿತು. ಓದು ಬರಹ ಬಾರದೆ ಇದ್ದರೂ ತಾನು ಕೆಲಸಕ್ಕೆ ಹೋದ ದಿನಗಳನ್ನು ದಿನನಿತ್ಯ ಗೋಡೆಯ ಮೇಲೆ ಒಂದೊಂದು ಗೆರೆ ಎಳೆದು ಗುರುತಿಸಿ ಕೊನೆಯಲ್ಲಿ ಲೆಕ್ಕಹಾಕಿ ಸಂಬಳ ಪಡೆಯುತ್ತಾನೆ. ಇದನ್ನು ಲಿಪಿಯ ಉಗಮ ಕಾಲ ಎನ್ನುವರು.

*ಪ್ರಶ್ನೆಗಳು :*

ಅ) ವ್ಯಾವಹಾರಿಕ ಮತ್ತು ಗ್ರಾಂಥಿಕ ಭಾಷೆಗಳಿಗಿರುವ ವ್ಯತ್ಯಾಸಗಳೇನು ?

ಆ) ಲಿಪಿಯ ಉಗಮ ಹೇಗಾಯಿತು ?

## ವಿಭಾಗ – 'ಬಿ'

### (ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** $10 \times 1 = 10$

46. ಗುಣಸಂಧಿಗೆ ಉದಾಹರಣೆಯಾಗಿರುವ ಪದ

(ಎ) ಗಿರೀಶ (ಬಿ) ಮಹರ್ಷಿ

(ಸಿ) ಮೈದೋರು (ಡಿ) ಷಣ್ಮುಖ

47. ಒಂದು ಪದವನ್ನೋ, ವಾಕ್ಯವನ್ನೋ ಹೇಳಿ, ಅದಕ್ಕೆ ಸಮನಾರ್ಥಕ ಪದವನ್ನೋ, ವಾಕ್ಯವನ್ನೋ ಹೇಳುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ

(ಎ) ವಾಕ್ಯವೇಷ್ಟನ (ಬಿ) ಉದ್ಧರಣ

(ಸಿ) ಆವರಣ (ಡಿ) ಭಾವಸೂಚಕ

48. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿರುವ ವಾಕ್ಯ ಇದು

(ಎ) ಸಂಯೋಜಿತ ವಾಕ್ಯ (ಬಿ) ಸಾಮಾನ್ಯ ವಾಕ್ಯ

(ಸಿ) ಪ್ರಶ್ನಾರ್ಥಕ ವಾಕ್ಯ (ಡಿ) ಮಿಶ್ರ ವಾಕ್ಯ

49. 'ಚಂದ್ರನಂತೆ' ಪದವು ವ್ಯಾಕರಣಾಂಶದ ಈ ಗುಂಪಿಗೆ ಸೇರಿದೆ

(ಎ) ತದ್ಧಿತಾಂತಾವ್ಯಯ (ಬಿ) ಕೃದಂತಾವ್ಯಯ

(ಸಿ) ತದ್ಧಿತಾಂತ ಭಾವನಾಮ (ಡಿ) ಕೃದಂತ ಭಾವನಾಮ

50. 'ರಾಹುಲ' ಪದವು ನಾಮಪದದ ಈ ಗುಂಪಿಗೆ ಸೇರಿದೆ

(ಎ) ರೂಢನಾಮ (ಬಿ) ಅನ್ವರ್ಥನಾಮ

(ಸಿ) ಅಂಕಿತನಾಮ (ಡಿ) ಭಾವನಾಮ

51. ಕೃದಂತಭಾವನಾಮಕ್ಕೆ ಉದಾಹರಣೆಯಾಗಿರುವ ಪದ

(ಎ) ಮಾಡಿದ (ಬಿ) ಮಾಟ

(ಸಿ) ಮಾಡಲು (ಡಿ) ಮಾಡುವ



www.careerindia.com

CAREERINDIA



52. ಚತುರ್ಥೀ ವಿಭಕ್ತಿ ಪ್ರತ್ಯಯದ ಕಾರಕಾರ್ಥ

(ಎ) ಸಂಪ್ರದಾನ (ಬಿ) ಸಂಬಂಧ

(ಸಿ) ಅಪಾದಾನ (ಡಿ) ಅಧಿಕರಣ

53. ಕ್ರಿಯಾರ್ಥಕಾವ್ಯಯಕ್ಕೆ ಉದಾಹರಣೆಯಾಗಿರುವ ಪದ

(ಎ) ನೀನೇ (ಬಿ) ಆದ್ದರಿಂದ

(ಸಿ) ಚೆನ್ನಾಗಿ (ಡಿ) ಸಾಕು

54. 'ವ್ಯಾಪಾರಿ' ಪದದ ತದ್ಭವ ರೂಪ

(ಎ) ಬಿಕಾರಿ (ಬಿ) ಬೀಮಾರಿ

(ಸಿ) ಬೇಹಾರಿ (ಡಿ) ಬಿಹಾರಿ

55. 'ಮಾಡಳು' ಪದವು ಈ ಕ್ರಿಯಾರೂಪಕ್ಕೆ ಸೇರಿದೆ

(ಎ) ವಿಧ್ಯರ್ಥಕ (ಬಿ) ಸಂಭಾವನಾರ್ಥಕ

(ಸಿ) ಪ್ರಶ್ನಾರ್ಥಕ (ಡಿ) ನಿಷೇಧಾರ್ಥಕ

**ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** 4 × 1 = 4

56. ಇನಾಮು : ಅರಬ್ಬೀ :: ಸಲಾಮು : .......................... .

57. ಹೊಗೆದೋರು : ಕ್ರಿಯಾಸಮಾಸ :: ಚಕ್ರಪಾಣಿ : .......................... .

58. ಕದಳಿ : ಬಾಳೆ :: ವಾಜಿ : .......................... .

59. ಹಾಲ್ಜೇನು : ಜೋಡುನುಡಿ :: ಬಟ್ಟಬಯಲು : .......................... .

60. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** 1 × 3 = 3

ಕಾದದಿರೆನಜ್ಜ ಪಾಂಡವ

ರಾದರ್ ಮೇಣಿಂದಿನೊಂದೆ ಸಮರದೊಳಾಂಮೇ

**ಅಥವಾ**

ಒಡವೆಯನರ್ಥಿಗಿತ್ತೆನವನೀತಳಮಂ ಗುರುಗಿತ್ತೆನೀಗಳೊಂ

61. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** 1 × 3 = 3

ಮಾತು ಬಲ್ಲವನಿಗೆ ಜಗಳವಿಲ್ಲ; ಊಟ ಬಲ್ಲವನಿಗೆ ರೋಗವಿಲ್ಲ.

**ಅಥವಾ**

ಸಿಡಿಲ ಸಿಡಿದ್ಹಾಂಗ ಗುಂಡು ಸುರಿದಾವ.



www.careerindia.com

CAREERINDIA



## ವಿಭಾಗ – 'ಸಿ'

### (ವಾಕ್ಯರಚನೆ ಹಾಗೂ ಬರವಣಿಗೆ ಕೌಶಲ)

62. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ ಬರೆಯಿರಿ :** 1 × 3 = 3

    * ಕೂಡಿ ಬಾಳಿದರೆ ಸ್ವರ್ಗ ಸುಖ.
    * ಮಾಡಿದ್ದುಣ್ಣೋ ಮಹಾರಾಯ.
    * ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ.

63. ನಿಮ್ಮನ್ನು ವಿಜಯಪುರದ ವಿವೇಕಾನಂದ ಪ್ರೌಢಶಾಲೆಯ 'ಹರ್ಷಿಣಿ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ಗಣರಾಜ್ಯೋತ್ಸವ ಆಚರಣೆ'ಯ ವರದಿಯನ್ನು ಪ್ರಕಟಿಸುವಂತೆ ಕೋರಿ 'ಹೊಸ ದಿಗಂತ' ದಿನಪತ್ರಿಕೆಯ ಸಂಪಾದಕರಿಗೊಂದು ಮನವಿ ಪತ್ರ ಬರೆಯಿರಿ. 1 × 5 = 5

**ಅಥವಾ**

ನಿಮ್ಮನ್ನು ಹಾಸನದ ಸರ್ಕಾರಿ ಪ್ರೌಢಶಾಲೆಯ 'ಅಶೋಕ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆದ ವಾರ್ಷಿಕೋತ್ಸವ ಸಮಾರಂಭದ ವಿವರವನ್ನು ತಿಳಿಸಿ, ಮೈಸೂರಿನಲ್ಲಿರುವ 'ಜಯಲಕ್ಷ್ಮಿ' ಎಂಬ ಹೆಸರಿನ ತಾಯಿಯವರಿಗೊಂದು ಪತ್ರ ಬರೆಯಿರಿ.

64. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** 1 × 5 = 5

    * ತ್ಯಾಜ್ಯವಸ್ತುಗಳ ನಿರ್ವಹಣೆ
    * ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿಯಲ್ಲಿ ಸಾಮಾಜಿಕ ಜಾಲತಾಣಗಳ ಸದ್ಬಳಕೆ
    * ಕರ್ನಾಟಕದ ನದಿ ನೀರಿನ ಸಮಸ್ಯೆಗಳು

www.careerindia.com

CAREERINDIA



www.careerindia.com